# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2604
2. ಸದಸ್ಯರ ಹೆಸರು : ಶ್ರೀ ಸೂರಜ್ ರೇವಣ್ಣ
3. ಉತ್ತರಿಸಬೇಕಾದ ದಿನಾಂಕ : 24.03.2022

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | "ಯಗಚಿ ನದಿ" ಯೋಜನೆಯಿಂದ ರಸ್ತೆಗಳಿಗೆ ಅನುದಾನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಪೂರ್ಣ ವಿವರ ನೀಡುವುದು. | ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ ಬರುವ ಯಗಚಿ ಯೋಜನೆಯಡಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ಅನುದಾನ ನೀಡಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. ಕಾಮಗಾರಿಗಳ ವಿವರಗಳನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ. |
| ಆ | ಈ ಯೋಜನೆಯು ಹಾಸನ ನಗರಕ್ಕೆ ಒಳಪಡುತ್ತಿದೆಯೇ (ಸಂಪೂರ್ಣ ವಿವರ ನೀಡುವುದು) | ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿನ ಯಗಚಿ ಯೋಜನೆಯು ಹಾಸನ ನಗರ ಸಭೆ ವ್ಯಾಪ್ತಿಗೆ ಒಳಪಡುವುದಿಲ್ಲ.<br>ಮುಂದುವರೆದು, ಯಗಚಿ ಯೋಜನಾ ವ್ಯಾಪ್ತಿಗೆ ಒಳಪಡುವ ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಯು ಹಾಸನ ವಿಧಾನಸಭಾ ಕ್ಷೇತ್ರದ ಉತ್ತರ ಭಾಗದಲ್ಲಿ ಹಾಸನ ನಗರ ಪ್ರದೇಶಕ್ಕೆ ಹೊಂದಿಕೊಂಡಂತೆ ಇರುವ ಗ್ರಾಮೀಣ ಪ್ರದೇಶದ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸುವ ಯೋಜನೆಯಾಗಿರುತ್ತದೆ. ಹಾಗೆಯೇ ಕಾಮಸಮುದ್ರ ಶಾಖಾ ನಾಲೆಯು ಹಾಸನ ವಿಧಾನಸಭಾ ಕ್ಷೇತ್ರದ ದಕ್ಷಿಣ ಭಾಗದ ಹಾಸನ ನಗರ ಪ್ರದೇಶಕ್ಕೆ ಹೊಂದಿಕೊಂಡಂತೆ ಇರುವ ಗ್ರಾಮೀಣ ಪ್ರದೇಶದಲ್ಲಿನ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸುವ ನಾಲೆಯಾಗಿರುತ್ತದೆ ಹಾಗೂ ಯಗಚಿ ಎಡದಂಡೆ ನಾಲೆಯು ಹಾಸನ ವಿಧಾನಸಭಾ ಕ್ಷೇತ್ರದ ಪಶ್ಚಿಮ ಭಾಗದ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸುವ ನಾಲೆಯಾಗಿರುತ್ತದೆ ಮತ್ತು ಯಗಚಿ ಎಡದಂಡೆ ನಾಲೆಯಿಂದ ಏತ ಯೋಜನೆ ಮುಖಾಂತರ ನೀರನ್ನು ಎತ್ತಿ ಹಾಸನ ನಗರ ವ್ಯಾಪ್ತಿಯಲ್ಲಿ ಬರುವ ಹುಣಸೀಕೆರೆ, ಸತ್ಯಮಂಗಲ ಕೆರೆ ಮತ್ತು ಚನ್ನಪಟ್ಟಣ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. |
| ಇ | ಈ ಯೋಜನೆಗೆ ಕಳೆದ 3 ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು? ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು. | ಯಗಚಿ ಯೋಜನೆಗೆ ಕಳೆದ 3 ವರ್ಷಗಳಿಂದ ಬಿಡುಗಡೆಯಾದ ಕಾಮಗಾರಿವಾರು ಅನುದಾನದ ವಿವರಗಳನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ. |

***ಸಂಖ್ಯೆ:ಜಸಂಇ 77 ಎನ್ಎಲ್ಎ 2022***

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು